# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 876 (1135)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ವಿಷಯ : ಜಲಾನಯನ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ಕುರಿತು

(ಅ) ಉಡುಪಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ಜಲಾನಯನ ಅಭಿವೃದ್ಧಿ ಯೋಜನೆಯಡಿಯಲ್ಲಿ ಅಭಿವೃದ್ಧಿ ಪಡಿಸಲಾದ ಕೃಷಿ ಹೊಂಡ ಮತ್ತು ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ಜಲಾನಯನ ಅಭಿವೃದ್ಧಿ ಯೋಜನೆಯಡಿಯಲ್ಲಿ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳು ಕಾಲುಸಂಕ ಮತ್ತು ಸೇತುವೆಗಳ ಸಂಖ್ಯೆ ಎಷ್ಟು ; ಅವುಗಳಿಗೆ ಬಳಸಲಾದ ಅನುದಾನವೆಷ್ಟು ; ಅವುಗಳು ಯಾವುವು ; (ಜಿಲ್ಲಾವಾರು, ತಾಲ್ಲೂಕುವಾರು ಮತ್ತು ಗ್ರಾಮವಾರು ಮಾಹಿತಿ ನೀಡುವುದು)

(ಇ) ಈ ಕಿಂಡಿ ಅಣೆಕಟ್ಟುಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗೆ ವಹಿಸಲಾಗಿದೆ ; ಕಳೆದ ಮೂರು ವರ್ಷಗಳಲ್ಲಿ ಇವುಗಳ ನಿರ್ವಹಣೆಗೆ ಬಿಡುಗಡೆಯಾದ ಅನುದಾನವೆಷ್ಟು ; ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳು ನಿರ್ವಹಣೆಯ ಕೊರತೆಯಿಂದ ಹಾಳಾಗುತ್ತಿರುವುದನ್ನು ತಪ್ಪಿಸಲು ಸರ್ಕಾರದ ಕ್ರಮವೇನು ?